2016-17 - 12 pages



# ಸಮಾಜ ಕಲ್ಯಾಣ ಇಲಾಖೆ

## ದಿನಾಂಕ: 15-07-2016 ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ - 2013 ರ ಪ್ರಕಾರ ರಾಜ್ಯ ಅನುಸೂಚಿತ ಜಾತಿಗಳು / ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್‌ನ ಸಭೆಯ ನಡವಳಿಗಳು

ಸ್ಥಳ: ಕೊಠಡಿ ಸಂಖ್ಯೆ : 334, 3ನೇ ಮಹಡಿ,
ಸಮ್ಮೇಳನ ಸಭಾಂಗಣ
ವಿಧಾನಸೌಧ, ಬೆಂಗಳೂರು

ಸಮಯ : ಸಂಜೆ 4.00 ಗಂಟೆಗೆ

### ಸಭೆಗೆ ಹಾಜರಾದ ಸದಸ್ಯರುಗಳು, ಮತ್ತು ಅಧಿಕಾರಿಗಳ ವಿವರ:-

| | | |
|---|---|---|
| 1. | ಶ್ರೀ. ಸಿದ್ಧರಾಮಯ್ಯ,<br>ಸನ್ಮಾನ್ಯ ಮುಖ್ಯಮಂತ್ರಿಗಳು | ಅಧ್ಯಕ್ಷರು |
| 2 | ಶ್ರೀ. ಹೆಚ್. ಆಂಜನೇಯ<br>ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು | ಸದಸ್ಯರು |
| 3 | ಶ್ರೀ. ಟಿ.ಬಿ. ಜಯಚಂದ್ರ<br>ಮಾನ್ಯ ಸಂಸದೀಯ ವ್ಯವಹಾರಗಳು, ಕಾನೂನು ಹಾಗೂ ಸಣ್ಣ ನೀರಾವರಿ ಸಚಿವರು | ಸದಸ್ಯರು |
| 4 | ಶ್ರೀ. ಹೆಚ್.ಕೆ. ಪಾಟೀಲ್,<br>ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು | ಸದಸ್ಯರು |
| 5 | ಶ್ರೀ ಬಸವರಾಜು ರಾಯರೆಡ್ಡಿ<br>ಮಾನ್ಯ ಉನ್ನತ ಶಿಕ್ಷಣ ಸಚಿವರು | ಸದಸ್ಯರು |
| 6 | ಶ್ರೀ ಕಾಗೋಡು ತಿಮ್ಮಪ್ಪ<br>ಮಾನ್ಯ ಕಂದಾಯ ಸಚಿವರು | ಸದಸ್ಯರು |
| 7 | ಶ್ರೀ ಹೆಚ್. ವೈ ಮೇಟಿ<br>ಮಾನ್ಯ ಅಬಕಾರಿ ಸಚಿವರು | ವಿಶೇಷ ಆಹ್ವಾನಿತರು |
| 8 | ಶ್ರೀ ಸಿ.ಎಸ್. ಶಿವಳ್ಳಿ<br>ಮಾನ್ಯ ಸಂಸದೀಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ | ವಿಶೇಷ ಆಹ್ವಾನಿತರು |
| 9 | ಶ್ರೀ. ಆರ್. ಧ್ರುವನಾರಾಯಣ್,<br>ಮಾನ್ಯ ಲೋಕಸಭಾ ಸದಸ್ಯರು | ಸದಸ್ಯರು |
| 10 | ಶ್ರೀ. ಗೋವಿಂದ ಎಂ ಕಾರಜೋಳ,<br>ಮಾನ್ಯ ವಿಧಾನಸಭಾ ಸದಸ್ಯರು | ಸದಸ್ಯರು |
| 11 | ಡಾ॥ ಉಮೇಶ್ ಜಾದವ್<br>ಮಾನ್ಯ ವಿಧಾನಸಭಾ ಸದಸ್ಯರು | ಸದಸ್ಯರು |

| | | |
|---|---|---|
| 12 | ಶ್ರೀ ಅರವಿಂದ ಜಾದವ್, ಭಾ.ಆ.ಸೇ.,<br>ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, | ವಿಶೇಷ ಆಹ್ವಾನಿತರು |
| 13 | ಶ್ರೀಮತಿ ಲತಾ ಜಿ. ಕೃಷ್ಣರಾವ್, ಭಾ.ಆ.ಸೇ.,<br>ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು | ಸದಸ್ಯರು |
| 14 | ಶ್ರೀ. ಐ.ಎಸ್.ಎನ್. ಪ್ರಸಾದ್, ಭಾ.ಆ.ಸೇ.,<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ | ಸದಸ್ಯರು |
| 15 | ಶ್ರೀ. ಗಂಗಾರಾಮ್ ಬಡೇರಿಯಾ, ಭಾ.ಆ.ಸೇ.,<br>ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿಗಳು |
| 16 | ಡಾ|| ಇ. ವೆಂಕಟಯ್ಯ, ಭಾ.ಆ.ಸೇ (ನಿವೃತ್ತ) | ನೋಡಲ್ ಏಜೆನ್ಸಿ ಸಲಹೆಗಾರರು |
| 17 | ಉಪ ಯೋಜನೆಗಳನ್ನು ಅನುಷ್ಠಾನ ಮಾಡುತ್ತಿರುವ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಹಾಗೂ ಇಲಾಖಾ ಮುಖ್ಯಸ್ಥರುಗಳು. | ವಿಶೇಷ ಆಹ್ವಾನಿತರು. |

ಪ್ರಾರಂಭದಲ್ಲಿ ನೋಡಲ್ ಏಜೆನ್ಸಿ ಅಧ್ಯಕ್ಷರು ಹಾಗೂ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನ ಅಧ್ಯಕ್ಷರಾದ ಸನ್ಮಾನ್ಯ ಮುಖ್ಯಮಂತ್ರಿಗಳು, ಸದಸ್ಯರುಗಳನ್ನು ಹಾಗೂ ವಿಶೇಷ ಆಹ್ವಾನಿತರುಗಳನ್ನು ಮತ್ತು ಸಭೆಗೆ ಹಾಜರಾದ ಎಲ್ಲರನ್ನೂ ಸ್ವಾಗತಿಸಿದರು.

ನಂತರ ಸಭೆಯನ್ನು ಉದ್ದೇಶಿಸಿ ಮಾತನಾಡಿ, 2015-16ನೇ ಸಾಲಿನಲ್ಲಿ SCSP/TSP ಅಡಿಯಲ್ಲಿ ಸಾಧಿಸಿದ ಪ್ರಗತಿಯ ಪರಿಶೀಲನೆ ಮತ್ತು 2016-17ನೇ ಸಾಲಿನಲ್ಲಿ ಈ ಎರಡು ಉಪಯೋಜನೆಗಳಡಿಯಲ್ಲಿ ಒದಗಿಸಲಾದ ರೂ.19542.96 ಕೋಟಿಗಳ ಅನುದಾನಕ್ಕೆ ವಿವಿಧ ಅಭಿವೃದ್ಧಿ ಇಲಾಖೆಗಳು ಸಲ್ಲಿಸಿದ ಕ್ರಿಯಾ ಯೋಜನೆಗಳನ್ನು ನೋಡಲ್ ಏಜೆನ್ಸಿಯು ದಿನಾಂಕ 25-05-2016 ಮತ್ತು 15-06-2016 ರಂದು ಸಭೆಗಳನ್ನು ನಡೆಸಿ, ಪರಿಶೀಲಿಸಿದರು. ಸಭೆಯಲ್ಲಿ ವಿವಿಧ ಅಭಿವೃದ್ಧಿ ಇಲಾಖೆಗಳಿಗೆ ರಾಜಸ್ವ ಮತ್ತು ಬಂಡವಾಳ ಲೆಕ್ಕಶೀರ್ಷಿಕೆಯಡಿ ಒದಗಿಸಿದ ಅನುದಾನದಲ್ಲಿ ವೆಚ್ಚವಾಗದೆ ಇರುವ ಅನುದಾನವನ್ನು (unspent amount) ನೋಡಲ್ ಇಲಾಖೆಯು ವಿವಿಧ ಇಲಾಖೆಗಳೊಂದಿಗೆ ಚರ್ಚಿಸಿ, ತೀರ್ಮಾನಿಸಿದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ಹಾಗೂ ಎಲ್ಲಾ ಇಲಾಖೆಗಳು ಸಲ್ಲಿಸಿದ ಸ್ಕೀಮುವಾರು ಕ್ರಿಯಾ ಯೋಜನೆಗಳನ್ನು ಪರಿಶೀಲಿಸಿ, ನೋಡಲ್ ಏಜೆನ್ಸಿಯು ಶಿಫಾರಸ್ಸು ಮಾಡಿರುವ ಕಾರ್ಯಕ್ರಮಗಳಿಗೆ ರಾಜ್ಯ ಅಭಿವೃದ್ಧಿ ಪರಿಷತ್ತಿನ ಅನುಮೋದನೆಗಾಗಿ ಮಂಡಿಸಲಾಗಿದೆ ಎಂದು ತಿಳಿಸಿ, ಸಭೆಯನ್ನು ನಡೆಸಿಕೊಡುವಂತೆ ಅಧ್ಯಕ್ಷರಾದ ಮಾನ್ಯ ಮುಖ್ಯಮಂತ್ರಿಗಳನ್ನು ಕೋರಿದರು. ಅದರಂತೆ, ಅಧ್ಯಕ್ಷರು 2015-16ನೇ ಸಾಲಿನಲ್ಲಿ SCSP/TSP ಅಡಿಯಲ್ಲಿ ಸಾಧಿಸಿದ ಪ್ರಗತಿ ಹಾಗೂ 2016-17ನೇ ಸಾಲಿನ ಕ್ರಿಯಾ ಯೋಜನೆಗಳ ವಿವರಗಳನ್ನು ನೀಡಲು ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ಸೂಚಿಸಿದರು.

ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿ ರವರು ಮಾನ್ಯ ಅಧ್ಯಕ್ಷರು, ಎಲ್ಲಾ ಸಧಸ್ಯರುಗಳು, ವಿಶೇಷ ಆಹ್ವಾನಿತರುಗಳು ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸರ್ಕಾರಿ ಅಧಿಕಾರಿಗಳನ್ನು ಮತ್ತೊಮ್ಮೆ ಸ್ವಾಗತಿಸಿದರು. ಮುಂದುವರೆದು, ರಾಜ್ಯದಲ್ಲಿ SCSP/TSP ಕಾಯಿದೆ 2013 ಜಾರಿಗೆ ಬಂದ ನಂತರ ಇದು ಮೂರನೇ ವರ್ಷವಾಗಿರುತ್ತದೆ. ರಾಜ್ಯದ ಯೋಜನಾ ಗಾತ್ರದಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಜನಸಂಖ್ಯೆಯ ಶೇಕಡಕ್ಕೆ ಅನುಗುಣವಾಗಿ, 24.1% ರಷ್ಟು ಅನುದಾನವನ್ನು ಒದಗಿಸಲಾಗುತ್ತಿದೆ. ಅದರಂತೆ, 2014-15 ನೇ ಸಾಲಿನಲ್ಲಿ ಒಟ್ಟು ರೂ.16323.00 ಕೋಟಿಗಳನ್ನು ನಿಗಧಿಪಡಿಸಿದ್ದು, ಈ ಪೈಕಿ ರೂ.14,487.17 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ಹಾಗೂ ಬಳಕೆಯಾಗದೇ ಇರುವ ರೂ.1835.83 ಕೋಟಿಗಳ ಅನುದಾನವನ್ನು 2016-17ನೇ ಸಾಲಿನಲ್ಲಿ ಒದಗಿಸಲಾಗಿದೆಯೆಂದು ವಿವರಿಸಿದರು.

(17)

2015-16ನೇ ಸಾಲಿನಲ್ಲಿ ಮಾರ್ಚ್ 2016 ರ ಅಂತ್ಯದವರೆಗೆ SCSP/TSP ರಡಿಯಲ್ಲಿ ಒಟ್ಟು ರೂ.16356.26 ಕೋಟಿಗಳನ್ನು ಒದಗಿಸಿದ್ದು, ಈ ಪೈಕಿ ರೂ.16155.07 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. SCSP ರಡಿ ನಿಗಧಿಗೆ 99.21% ರಷ್ಟು ಮತ್ತು TSP ರಡಿ 99.19% ರಷ್ಟು ವೆಚ್ಚವಾಗಿರುತ್ತದೆ.

## 2015-16ನೇ ಸಾಲಿನ ಪ್ರಗತಿಯ ಸಾರಾಂಶ

(ರೂ. ಕೋಟಿಗಳಲ್ಲಿ)

| ಉಪ ಯೋಜನೆ | ಹಂಚಿಕೆ | ಬಿಡುಗಡೆ | ಖರ್ಚು | ನಿಗಧಿಗೆ % | ಬಿಡುಗಡೆಗೆ % |
|---|---|---|---|---|---|
| SCSP | 11773.54 | 11756.51 | 11680.11 | 99.21 | 99.35 |
| TSP | 4582.72 | 4511.33 | 4474.96 | 97.65 | 99.19 |
| Total | 16356.26 | 16267.84 | 16155.07 | 98.77 | 99.31 |

ಸದಸ್ಯರಾದ ಶ್ರೀ. ಆರ್. ಧ್ರುವನಾರಾಯಣ್ ರವರು ಮಾತನಾಡಿ, ಇಲಾಖೆಯು ನೀಡಿದ ಕಾರ್ಯಕ್ಷಮತೆ ಯಂತೆ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ನಗರಾಭಿವೃದ್ಧಿ ಹಾಗೂ ಆರೋಗ್ಯ ಇಲಾಖೆಗಳಿಗೆ ಒದಗಿಸಿದ ಅನುದಾನದಲ್ಲಿ ಕಡಿಮೆ ಪ್ರಗತಿಯನ್ನು ಸಾಧಿಸಿದೆ ಎಂದು ತಿಳಿಸುತ್ತಾ, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆಯಲ್ಲಿ ರೂ.57.73 ಕೋಟಿಗಳು, ಉನ್ನತ ಶಿಕ್ಷಣ ಇಲಾಖೆ ರೂ.27.50 ಕೋಟಿಗಳು, ನಗರಾಭಿವೃದ್ಧಿ ರೂ.21.05 ಕೋಟಿಗಳು, ಹಾಗೂ ಆರೋಗ್ಯ ಇಲಾಖೆ ರೂ.98.58 ಕೋಟಿಗಳು, ವೆಚ್ಚವಾಗಿರುವುದಿಲ್ಲವೆಂದು ಪ್ರಸ್ತಾಪಿಸಿದರು. ಇದಕ್ಕೆ ಮಾನ್ಯ ಮುಖ್ಯಮಂತ್ರಿಗಳು ಸಂಬಂಧಿಸಿದ ಅಧಿಕಾರಿಗಳು ಉತ್ತರ ನೀಡುವಂತೆ ಸೂಚಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ, ರವರು ಮಾತನಾಡಿ ಕಳೆದ ಸಾಲಿನಲ್ಲಿ SCSP/TSP ರಡಿಯಲ್ಲಿ ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದಿಂದ ಅನುದಾನವು ಬಿಡುಗಡೆಯಾಗಿಲ್ಲದ ಕಾರಣ ವೆಚ್ಚ ಮಾಡಲಾಗಿರುವುದಿಲ್ಲವೆಂದು ತಿಳಿಸಿದರು. ಪ್ರಸಕ್ತ ಸಾಲಿನಲ್ಲಿ ನಿಗದಿಪಡಿಸಿದ ಪೂರ್ಣ ಅನುದಾನವನ್ನು ಖರ್ಚು ಮಾಡಲಾಗುವುದೆಂದು ತಿಳಿಸಿದರು.

ಶ್ರೀ. ಆರ್. ಧ್ರುವನಾರಾಯಣ್ ರವರು ತಮ್ಮ ಮಾತನ್ನು ಮುಂದುವರೆಸುತ್ತಾ, ಪ್ರತಿ ತಾಲೂಕಿನಲ್ಲಿಯೂ ಎರಡು ಪದವಿ ಕಾಲೇಜುಗಳಿದ್ದು, ಇದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ವ್ಯಾಸಂಗವನ್ನು ಮಾಡುತ್ತಿದ್ದು, ಸದರಿ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯಗಳು ಕಲ್ಪಿಸಬೇಕಾಗಿದೆ. ಉದಾಹರಣೆಗೆ ಮೈಸೂರು ಮಹಾರಾಣಿ ಕಾಲೇಜಿಗೆ ಚಾಮರಾಜನಗರ, ಕೊಡಗು, ಮಂಡ್ಯ, ಮುಂತಾದ ಜಿಲ್ಲೆಗಳಿಂದ ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕಾಗಿ ಬರುತ್ತಿದ್ದಾರೆ. ಆದ್ದರಿಂದ, ಪ್ರತಿ ತಾಲೂಕಿನಲ್ಲಿ ಹಾಸ್ಟೇಲ್ ವ್ಯವಸ್ಥೆಯನ್ನು ಮಾಡುವುದು ತುಂಬಾ ಅಗತ್ಯವಿದೆಯೆಂದು ತಿಳಿಸಿ ಹಾಸ್ಟೇಲ್‌ಗಳನ್ನು ಮಂಜೂರು ಮಾಡಲು ಕೋರಿದರು.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಮೈಸೂರಿನಲ್ಲಿ ಮಹಾರಾಣಿ ಕಾಲೇಜು ವಿದ್ಯಾರ್ಥಿಗಳಿಗೆ college attached hostel ಇದ್ದರೂ ಸಹ ಪ್ರತ್ಯೇಕವಾಗಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆ ಹಾಗೂ ಸಾಮಾನ್ಯ ವರ್ಗದವರಿಗೆ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಿದರು.

ಶ್ರೀ ಹೆಚ್.ಕೆ. ಪಾಟೀಲ್, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾತನಾಡಿ, ಧಾರವಾಡವು ಉತ್ತರ ಕರ್ನಾಟಕದ ಪ್ರಮುಖ ಶೈಕ್ಷಣಿಕ ಕೇಂದ್ರವಾಗಿದ್ದು, ಇಲ್ಲಿಗೂ ಸಹ ವಿವಿಧ ಜಿಲ್ಲೆಗಳಿಂದ ವಿದ್ಯಾರ್ಥಿಗಳು ಉನ್ನತ ಮಟ್ಟದ ವ್ಯಾಸಂಗಕ್ಕಾಗಿ ಆಗಮಿಸುತ್ತಿದ್ದು, ಇಲ್ಲಿಯೂ ಸಹ ಸಾಮಾನ್ಯ ವರ್ಗದ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹೆಚ್ಚಿನ ವಸತಿ ನಿಲಯಗಳ ಅವಶ್ಯಕತೆ ಇದೆ. ಆದ್ದರಿಂದ, ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲು ಕೋರಿದರು.

ಮಾನ್ಯ ಮುಖ್ಯಮಂತ್ರಿಗಳು, ಬೇಡಿಕೆ ಇರುವ ಸಾಮಾನ್ಯ ವರ್ಗಗಳ ಮತ್ತು ಪರಿಶಿಷ್ಟ ಜಾತಿ/ ಪಂಗಡದ ಜನಾಂಗದ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ಹೊಸ ಹಾಸ್ಟೇಲ್‌ಗಳನ್ನು ತೆರೆಯಲು ಜಮೀನಿನೊಂದಿಗೆ ಪ್ರಸ್ತಾವನೆಯನ್ನು ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡಲು ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ರವರು ಮಾತನಾಡಿ, ಶಿಕ್ಷಣಕ್ಕೆ ಅನುಕೂಲವಾಗುವಂತೆ, ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲು ಸಮಾಜ ಕಲ್ಯಾಣ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದು ತಿಳಿಸಿದರು. ಕಳೆದ ಸಾಲಿನಲ್ಲಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಮಾಡಲು ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯು ಅಂತಿಮವಾಗದೇ ಇರುವ ಕಾರಣ ಹಿಂದಿನ ಸಾಲಿನಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಅನುದಾನವನ್ನು ಖರ್ಚು ಮಾಡಿರುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣ ಅನುದಾನವನ್ನು ವೆಚ್ಚ ಮಾಡಲಾಗುವುದೆಂದು ತಿಳಿಸಿದರು.

ಸದಸ್ಯರಾದ ಶ್ರೀ ಗೋವಿಂದ ಕಾರಜೋಳ ರವರ ಮಾತನಾಡಿ, ಬಿಜಾಪುರ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾನಿಯರಿಗೆ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಿದ ರೂ.5.00 ಕೋಟಿಗಳ ಅನುದಾನ ಕಡಿಮೆ ಇದ್ದು, ಇನ್ನೂ ಹೆಚ್ಚಿನ ಅನುಧಾನ ಒದಗಿಸಲು ಕೋರಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾತನಾಡಿ, 2015-16 ನೇ ಸಾಲಿನಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಹಾಸ್ಟೇಲ್ ಕಟ್ಟಡ ನಿರ್ಮಾಣ ಮಾಡಲು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಒಟ್ಟು 29 ಹಾಸ್ಟೇಲ್ ಕಟ್ಟಡ ನಿರ್ಮಾಣ ಮಾಡಲು SCSP / TSP ರಡಿಯಲ್ಲಿ ಒಟ್ಟು ರೂ.92.71 ಕೋಟಿಗಳನ್ನು ಆಯಾ ವಿಶ್ವವಿದ್ಯಾಲಯಗಳಿಗೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನವನ್ನು ಉಪಯೋಗಿಸಿಕೊಂಡು ಎಲ್ಲಾ ಹಾಸ್ಟೆಲ್‌ಗಳನ್ನು ಪೂರ್ಣಗೊಳಿಸಲು ಉನ್ನತ ಶಿಕ್ಷಣ ಇಲಾಖೆ, ಕೃಷಿ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಇವರು ಸಂಬಂಧಿಸಿದ ಕುಲಪತಿಗಳಿಗೆ ನಿರ್ದೇಶನ ನೀಡಿ, ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಬೇಕೆಂದು ತಿಳಿಸಿದರು. ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿ/ ಪಂಗಡದ ಹಾಸ್ಟೇಲ್ ಅವಶ್ಯಕತೆ ಇರುವ ಕಡೆ ಕಾಲೇಜು ಹಾಸ್ಟೇಲ್‌ಗಳನ್ನು ಮಂಜೂರು ಮಾಡಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀ ಗೋವಿಂದ ಕಾರಜೋಳ ರವರು ತಮ್ಮ ಮಾತನ್ನು ಮುಂದುವರೆಸಿ, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ವಿವಿಧ ರೀತಿಯ ಕೌಶಲ್ಯ ತರಬೇತಿಗಳನ್ನು ನೀಡಲು ಅವಕಾಶವಿದ್ದು, ಸದರಿ ತರಬೇತಿ ವೆಚ್ಚವನ್ನು ಸರ್ಕಾರವೇ ಭರಿಸಿದಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳು ದೊರೆಯಲು ಸಾಧ್ಯವಿದೆಯೆಂದು ಪ್ರಸ್ತಾಪಿಸಿದರು.

170

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ರಾಜ್ಯದ ಎಲ್ಲಾ ಕಡೆಗಳಲ್ಲೂ ಹೆಚ್ಚಿನ ಬೇಡಿಕೆ ಬರುತ್ತಿರುವುದರಿಂದ, ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡಲು ಸಲಹೆ ನೀಡುತ್ತಾ, ಈಗಾಗಲೇ ಸ್ವಂತ ಕಟ್ಟಡವನ್ನು ಹೊಂದಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಹಾಲಿ ಇರುವ ಸಂಖ್ಯಾಬಲವನ್ನು ಪ್ರತಿ ತರಗತಿವಾರು 10 ಸೀಟುಗಳಂತೆ ಹೆಚ್ಚಿಸುವಂತೆ ಅಧ್ಯಕ್ಷರನ್ನು ಕೋರಿದರು.

ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯದಲ್ಲಿ ಪರಿಶಿಷ್ಟ ಜಾತಿ/ಪಂಗಡದ ಜಾನಪದ ಕಲಾವಿದರಿಗೆ ಅವಕಾಶ ನೀಡುವ ಸಲುವಾಗಿ ಡಿಪ್ಲಮೋ/ಡಿಗ್ರಿ ಕೋರ್ಸುಗಳನ್ನು ಪ್ರಾರಂಭಿಸಬೇಕು ಇದರಿಂದ ಅವರಿಗೆ ಜಾನಪದ ಕ್ಷೇತ್ರದಲ್ಲಿ ಉನ್ನತ ಮಟ್ಟಕ್ಕೆ ಬೆಳೆಯುವ ಅವಕಾಶದ ಜೊತೆಗೆ ಆರ್ಥಿಕವಾಗಿ ಸಬಲರಾಗುತ್ತಾರೆಯಾದ್ದರಿಂದ ಡಿಪ್ಲಮೋ/ಡಿಗ್ರಿ ಕಾಲೇಜು ವಿದ್ಯಾರ್ಥಿಗಳಿಗೆ ಕೂಡ ವಿದ್ಯಾರ್ಥಿನಿಲಯಗಳ ವ್ಯವಸ್ಥೆ ಮಾಡುವಂತೆ ಸಹ ಸಲಹೆ ನೀಡಿದರು.

ಮಾನ್ಯ ಮುಖ್ಯಮಂತ್ರಿಗಳು ಉತ್ತರಿಸುತ್ತಾ, ನಮ್ಮ ಸರ್ಕಾರ ವಸತಿ ಶಾಲೆಗಳು ಇಲ್ಲದೆ ಇರುವ ಎಲ್ಲಾ ಹೋಬಳಿಗಳಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸಲು ನಿರ್ಧರಿಸಿದ್ದು, ಅದರಂತೆ ಕ್ರಮ ಜರುಗಿಸಲಾಗುತ್ತಿದೆ.

ಶ್ರೀ. ಬಸವರಾಜು ರಾಯರೆಡ್ಡಿ, ಮಾನ್ಯ ಉನ್ನತ ಶಿಕ್ಷಣ ಸಚಿವರು ಮಾತನಾಡಿ ಡಾ: ಬಿ.ಆರ್. ಅಂಬೇಡ್ಕರ್ ರವರ ಹೆಸರಿನಲ್ಲಿ ಡಾ: ಬಿ.ಆರ್ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ್ನು ಸ್ಥಾಪಿಸಿ, ಅರ್ಥಶಾಸ್ತ್ರದ ಉನ್ನತ ಅಧ್ಯಯನಕ್ಕಾಗಿ ಅವಕಾಶ ಕಲ್ಪಿಸಬೇಕೆಂದು ಕೋರಿದರು ಮತ್ತು ಸಮಾಜ ಕಲ್ಯಾಣ ಇಲಾಖೆಯಿಂದ ಅನುದಾನ ಒದಗಿಸಲು ಕೋರಿದರು. ಈ ಬಗ್ಗೆ ಪರಿಶೀಲಿಸುವುದಾಗಿ ಮಾನ್ಯ ಸಮಾಜ ಕಲ್ಯಾಣ ಸಚಿವರು ತಿಳಿಸಿದರು.

ಶ್ರೀ. ಆರ್. ಧ್ರುವನಾರಾಯಣ್ ರವರು ಮಾತನಾಡಿ, ಪ್ರಸ್ತುತ ವಸತಿ ಶಾಲೆಗಳಲ್ಲಿ ಕೇವಲ 10ನೇ ತರಗತಿಯವರೆವಿಗೂ ಮಾತ್ರ ವ್ಯಾಸಂಗ ಮಾಡಲು ಅವಕಾಶವಿದ್ದು, 10ನೇ ತರಗತಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಪಿ.ಯು.ಸಿ. ವ್ಯಾಸಂಗ ಮಾಡಲು ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ವಸತಿ ಶಾಲೆಗಳಲ್ಲಿ ಪಿ.ಯು.ಸಿ. ತರಗತಿಯನ್ನು ಪ್ರಾರಂಭಿಸಬೇಕೆಂದು ಕೋರಿದರು. ಮಾನ್ಯ ಸಮಾಜ ಕಲ್ಯಾಣ ಸಚಿವರು ಪ್ರಸ್ತುತ ಜಿಲ್ಲೆಗೆ ಒಂದರಂತೆ ವಸತಿಯುತ ಪಿ.ಯು.ಸಿ. ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ಬಗ್ಗೆ ಪರಿಶೀಲಿಸಬಹುದಾಗಿದೆ ಎಂದು ತಿಳಿಸಿದರು. ಇದಕ್ಕೆ ಮಾನ್ಯ ಮುಖ್ಯಮಂತ್ರಿಗಳು ಪ್ರತಿಕ್ರಿಯಿಸಿ, ಪ್ರತಿ ಹೋಬಳಿಗೂ ಒಂದರಂತೆ ವಸತಿ ಶಾಲೆಯನ್ನು ಮಂಜೂರು ಮಾಡಲು ಸರ್ಕಾರವು ಉದ್ದೇಶಿಸಿದ್ದು ವಸತಿ ಶಾಲೆಗಳಲ್ಲಿ ಪಿ.ಯು.ಸಿ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸುವುದೆಂದು ತಿಳಿಸಿದರು.

ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ, ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ ರವರು 2015-16 ನೇ ಸಾಲಿನಲ್ಲಿ ಒಟ್ಟು ರೂ.98.00 ಕೋಟಿಗಳು ವೆಚ್ಚವಾಗದೇ ಇರುವ ಬಗ್ಗೆ ಸಭೆಯಲ್ಲಿ ವಿವರಿಸಿದರು. ಒಟ್ಟು ಅನುದಾನದಲ್ಲಿ ರೂ.70.00 ಕೋಟಿಗಳು ಎನ್.ಹೆಚ್.ಎಂ ಕಾರ್ಯಕ್ರಮಕ್ಕೆ ಉಪಯೋಗ ಮಾಡಬೇಕಾಗಿದ್ದು ಮತ್ತು ರೂ.28.00 ಕೋಟಿಗಳನ್ನು ಆರೋಗ್ಯ ಸುರಕ್ಷಾ ಟ್ರಸ್ಟ್‌ನಿಂದ ಅನುಷ್ಠಾನಗೊಳಿಸಬೇಕಾಗಿದ್ದು, ಈ ಒಟ್ಟು ಅನುದಾನವನ್ನು ಈ ವರ್ಷ ಖರ್ಚು ಮಾಡುವ ಬಗ್ಗೆ ಪುನರ್ ನವೀಕರಣ (Re-validation) ಮಾಡಿಕೊಂಡು ನಂತರ ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರಿಗೆ ಆರೋಗ್ಯ ಇಲಾಖೆಯಿಂದ ಆಯೋಜಿಸಿಕೊಂಡಿರುವ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗುವುದು ಎಂದು ತಿಳಿಸಿದರು. ಪ.ಜಾತಿ / ಪ.ಪಂಗಡ ಜನರಿಗೆ ಉಪಯೋಗವಾಗುವಂತಹ ಕಾರ್ಯಕ್ರಮಗಳನ್ನು ಆಂದೋಲನಾ ರೂಪದಲ್ಲಿ ಆಯೋಜಿಸಿ, ಸುಮಾರು 7000 ಹಳ್ಳಿಗಳಲ್ಲಿ ಮುಂಬರುವ ಸೆಪ್ಟೆಂಬರ್ 2016 ರ ಅಂತ್ಯದೊಳಗೆ ಇಲಾಖೆಯಲ್ಲಿ ಉಳಿತಾಯವಾಗಿರುವ ಅನುದಾನವನ್ನು ಶೇ.100 ರಷ್ಟು ಉಪಯೋಗಿಸಿಕೊಳ್ಳಲಾಗುವುದೆಂದು ತಿಳಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಈ ಬಗ್ಗೆ ಮಾತನಾಡಿ, ಈ ಕಾರ್ಯಕ್ರಮಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಿ ಎಲ್ಲಾ ಫಲಾನುಭವಿಗಳಿಗೆ ನೀಡಬೇಕಾದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ಒದಗಿಸಲು ಕ್ರಮ ಜರುಗಿಸಬೇಕೆಂದು ಸೂಚಿಸಿದರು.

ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರು ಮಾತನಾಡಿ, ಎಲ್ಲಾ ಇಲಾಖೆಗಳಲ್ಲಿ ಖರ್ಚಾಗದೆ ಇರುವ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಗೆ ಕ್ರೋಢೀಕೃತ ಮಾಡಿ, ನೀಡಲು ಕೋರಿದರು. ಏಕೆಂದರೆ ರಾಜ್ಯದ ಸಮಗ್ರ ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರ ಅಭಿವೃದ್ಧಿಗಾಗಿ ಮುಂಬರುವ 2 ವರ್ಷಗಳಲ್ಲಿ ಬಹಳಷ್ಟು ವಸತಿ ಶಾಲೆ / ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಿಸಬೇಕಾಗಿದ್ದು, ಸದರಿ ಕಾರ್ಯಕ್ರಮಗಳಿಗೆ ಮತ್ತು ಇತರೆ ಮುಖ್ಯವಾದ ಕಾರ್ಯಕ್ರಮಗಳಿಗೆ ಬೇಕಾಗುವ ಅನುದಾನದ ಬಗ್ಗೆ ಈ ಕೆಳಗಿನಂತೆ ವಿವರಿಸಿದರು.

- ವಿದ್ಯಾರ್ಥಿನಿಲಯಗಳ ಕಟ್ಟಡಗಳು - 300 ವಿದ್ಯಾರ್ಥಿನಿಲಯಗಳು ಮಂಜೂರಾಗಿದ್ದು, ಅವುಗಳಿಗೆ ಸ್ವಂತ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಂದು ಕಟ್ಟಡಕ್ಕೆ ರೂ.5.00 ಕೋಟಿಗಳಂತೆ ಒಟ್ಟು 100 ವಿದ್ಯಾರ್ಥಿನಿಲಯಗಳ ಕಟ್ಟಡಗಳಿಗೆ ಒಟ್ಟಾರೆ ರೂ.1850.00 ಕೋಟಿಗಳು ಬೇಕಾಗಿರುತ್ತದೆ.

- KREIS ಸಂಸ್ಥೆಯ ವತಿಯಿಂದ ಹೋಬಳಿಗೆ ಒಂದರಂತೆ 300 ವಸತಿ ಶಾಲೆಗಳು ಮಂಜೂರಾಗಿದ್ದು, ಅವುಗಳಿಗೆ ಕಟ್ಟಡ ನಿರ್ಮಿಸಬೇಕಾಗಿದ್ದು, ಒಂದು ವಸತಿ ಶಾಲೆಗೆ ರೂ.15.00 ಕೋಟಿಗಳಂತೆ ಒಟ್ಟು 300 ವಸತಿ ಶಾಲೆಗಳಿಗೆ ಒಟ್ಟಾರೆಯಾಗಿ ರೂ.4500.00 ಕೋಟಿಗಳುಬೇಕಾಗಿರುತ್ತದೆ.

- ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರಿಗಾಗಿ ವಸತಿ ನಿರ್ಮಾಣ ಮಾಡಲು ಈಗಾಗಲೇ ಆಯವ್ಯಯ ಭಾಷಣದಲ್ಲಿ 4 ಲಕ್ಷ ಮನೆಗಳನ್ನು ಘೋಷಿಸಲಾಗಿದ್ದು, ಮುಂಬರು ಎರಡು ವರ್ಷಗಳಲ್ಲಿ ಇನ್ನೂ 6 ಲಕ್ಷ ಮನೆಗಳನ್ನು ನಿರ್ಮಿಸಲು ಪ್ರತಿ ಮನೆಗೆ ರೂ.1.50 ಲಕ್ಷದಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಿ ಘಟಕ ವೆಚ್ಚ ಹೆಚ್ಚಿಸಿಕೊಂಡು ರೂ.10000.00 ಕೋಟಿಗಳ ಅವಶ್ಯಕತೆಯಿರುತ್ತದೆ. ಸದರಿ ವಸತಿ ನಿರ್ಮಾಣ ಕಾಮಗಾರಿಗಳಿಗೆ ಭಾರತ ಸರ್ಕಾರದಲ್ಲಿ ಇರುವ ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆಯ ಬದಲಿಗೆ ನಮ್ಮ ರಾಜ್ಯದಲ್ಲಿ ಮಾನ್ಯ ಮುಖ್ಯಮಂತ್ರಿಯವರ ಆದರ್ಶ ಗ್ರಾಮ ಯೋಜನೆಯ ಹೆಸರಿನಲ್ಲಿ ಅನುಷ್ಠಾನಗೊಳಿಸುವುದಾಗಿ ಮಾನ್ಯ ಇಲಾಖಾ ಸಚಿವರು ತಿಳಿಸಿದರು.

- ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರ ಜನಸಂಖ್ಯೆ ಶೇಕಡ 50 ಕ್ಕಿಂತ ಹೆಚ್ಚಿಗೆ ಇರುವ ಗ್ರಾಮಗಳನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲು ಪ್ರತಿ ಗ್ರಾಮಕ್ಕೆ ರೂ.2.00 ಕೋಟಿಗಳಂತೆ, 2000 ಗ್ರಾಮಗಳನ್ನು ಅಭಿವೃದ್ಧಿ ಪಡಿಸಲು ರೂ.4000.00 ಕೋಟಿಗಳ ಅವಶ್ಯಕತೆಯಿರುತ್ತದೆ.

- ಡಾ: ಬಾಬು ಜಗಜೀವನ ರಾಂ ಸಂಶೋಧನಾ ಮತ್ತು ತರಬೇತಿ ಕೇಂದ್ರ ನಿರ್ಮಿಸಲು ರೂ.100.00 ಕೋಟಿಗಳ ಅವಶ್ಯಕತೆಯಿರುತ್ತದೆ.

- ಡಾ: ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮಗಳಲ್ಲಿ ಸಹಾಯಧನ ಸ್ವಯಂ ಉದ್ಯೋಗ ಸಲುವಾಗಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಆದ್ದರಿಂದ ಈ ಯೋಜನೆಗಳಿಗೆ ಹೆಚ್ಚಿನ ಅನುದಾನದ ಅವಶ್ಯಕತೆಯಿದ್ದು, ಹೆಚ್ಚಿನ ಜನರಿಗೆ ಸ್ವಯಂ ಉದ್ಯೋಗ ನೀಡುವ ಸಲುವಾಗಿ ರೂ.1500.00 ಕೋಟಿಗಳ ಅವಶ್ಯಕತೆಯಿರುತ್ತದೆ.

ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸಬೇಕಾದ ಮೇಲ್ಕಂಡ ಕಾಮಗಾರಿ ಹಾಗೂ ಕಾರ್ಯಕ್ರಮಗಳಿಗೆ ಒಟ್ಟಾರೆಯಾಗಿ ಎಲ್ಲಾ ರೂ.21750.00 ಕೋಟಿಗಳ ಅವಶ್ಯಕತೆ ಇರುವುದರಿಂದ, 2014-15 ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ಇಲಾಖೆಗಳಲ್ಲಿ ಬಳಕೆಯಾಗದೇ ಇರುವ ಅನುದಾನವನ್ನು (Unspent amount) ಮೊತ್ತ ರೂ.1835.00 ಕೋಟಿಗಳ ಅನುದಾನವನ್ನು ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಸಮಾಜ ಕಲ್ಯಾಣ ಇಲಾಖೆಗೆ ನೀಡಬೇಕೆಂದು ಮಾನ್ಯ ಮುಖ್ಯಮಂತ್ರಿಗಳಲ್ಲಿ ಕೋರಿದರು.

ಸದರಿ ವಿಚಾರವಾಗಿ ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ ಒಟ್ಟಾರೆ ರಾಜ್ಯದ ಎಲ್ಲಾ ಅಭಿವೃದ್ಧಿ ಇಲಾಖೆಗಳಿಂದ ಉಳಿತಾಯವಾಗುವ ಅನುದಾನವನ್ನು ಕೇವಲ ಸಮಾಜ ಕಲ್ಯಾಣ ಇಲಾಖೆ ಒಂದಕ್ಕೆ ನೀಡಲು ಅವಕಾಶವಿರುವುದಿಲ್ಲ ಎಂದು ತಿಳಿಸಿದರು. ಮತ್ತು ಆಯಾ ಇಲಾಖೆಗಳಲ್ಲಿ ಬಳಕೆಯಾಗದೇ ಇರುವ ಮೊತ್ತಕ್ಕೆ ಸೀಮಿತವಾಗಿ ಕ್ರಿಯಾಯೋಜನೆಯಲ್ಲಿ ಶಿಫಾರಸ್ಸು ಮಾಡಿದ ಕಾರ್ಯಕ್ರಮ/ಕಾಮಗಾರಿಗಳನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲು ಮತ್ತು ಪ್ರಸಕ್ತ ವರ್ಷದಲ್ಲಿ ಶೇ.100 ಕ್ಕೆ 100 ಪ್ರತಿಶತ ಖರ್ಚಾಗಲೇಬೇಕೆಂದು ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.

ಮಾನ್ಯ ಗೋವಿಂದ ಕಾರಜೋಳ ರವರು ಮಾತನಾಡಿ, ನಮ್ಮ ಕ್ಷೇತ್ರದಲ್ಲಿ ಹಲವಾರು ಕಡೆಗಳಲ್ಲಿ ಕಾಂಕ್ರೀಟ್ ರಸ್ತೆ, ಕುಡಿಯುವ ನೀರಿನ ಸೌಲಭ್ಯ, ರಸ್ತೆ, ಚರಂಡಿ ಕಾಮಗಾರಿ ಇತ್ಯಾದಿಗಳ ಬದಲಾಗಿ ಈ ಉಪಯೋಜನೆಗಳಡಿಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರಿಗೆ ಅನುಕೂಲವಾಗುವಂತಹ ಭೂಮಿ ಖರೀದಿ ಯೋಜನೆಗೆ ಹಾಲಿ ಇರುವ ಘಟಕ ವೆಚ್ಚವನ್ನು ರೂ.10.00 ಲಕ್ಷದಿಂದ ರೂ.20.00 ಲಕ್ಷಗಳಿಗೆ ಹೆಚ್ಚಿಸುವಂತೆ ಕೋರಿದರು. ಗಂಗಾ ಕಲ್ಯಾಣ ಯೋಜನೆ, ಸ್ವಯಂ ಉದ್ಯೋಗ ಯೋಜನೆ, ಮತ್ತು ವಿವಿಧ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಹೆಚ್ಚಿನ - ಆದ್ಯತೆಯನ್ನು ನೀಡಿದಲ್ಲಿ ಈ ಜನಾಂಗದವರಿಗೆ ನೇರವಾಗಿ ಉಪಯೋಗವಾಗುತ್ತದೆಯೆಂದು ತಿಳಿಸಿದರು. ಅರಣ್ಯ ಇಲಾಖೆಯಿಂದ ಅರಣ್ಯ ವಾಸಿಗಳಿಗೆ ನೀಡುತ್ತಿರುವ ಸೋಲಾರ್ ವಾಟರ್ ಹೀಟರ್, ಸೋಲಾರ್ ಲ್ಯಾಂಪ್ ಇವುಗಳಿಗೆ ಬದಲಾಗಿ ಎಲ್ ಪಿ ಜಿ ಗ್ಯಾಸ್ ಸೌಲಭ್ಯ ನೀಡಲು ಕೋರಿದರು. ಇದಕ್ಕೆ SCSP/TSP ಕಾರ್ಯಕ್ರಮಗಳಲ್ಲಿ ಫಲಾನುಭವಿಗಳ ಆಯ್ಕೆ ಮಾಡುವಾಗ ಆಯಾ ಕ್ಷೇತ್ರದ ಶಾಸಕರುಗಳ ಅನುಮೋದನೆ ಪಡೆಯಲು ಅಧಿಕಾರಿಗಳಿಗೆ ಸೂಚನೆ ನೀಡಲು ಕೋರಿದರು. ಪರಿಶಿಷ್ಟ ಜಾತಿ/ಪಂಗಡದ ಜನಾಂಗದ ಉದ್ದಿಮೆದಾರರಿಗೆ ಶೇ.4 ರ ರಿಯಾಯಿತಿ ಬಡ್ಡಿ ದರದಲ್ಲಿ ನೀಡುತ್ತಿರುವ ಸಾಲದ ಮಿತಿಯನ್ನು ರೂ.5.00 ಕೋಟಿಯಿಂದ ರೂ.10.00 ಕೋಟಿಗಳಿಗೆ ಹೆಚ್ಚು ಮಾಡಿರುವುದಕ್ಕೆ ಸರ್ಕಾರಕ್ಕೆ ಧನ್ಯವಾದಗಳನ್ನು ತಿಳಿಸಿದರು.

ಶ್ರೀ ಸಿ.ಎಸ್. ಶಿವಳ್ಳಿ, ಮಾನ್ಯ ಸಂಸದೀಯ ಕಾರ್ಯದರ್ಶಿಗಳು ಮಾತನಾಡಿ, ಉತ್ತರ ಕರ್ನಾಟಕ ಭಾಗದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹೆಚ್ಚಾಗಿರುವುದರಿಂದ, ಕಾಲೋನಿಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಬೇಕೆಂದು ಕೋರಿದರು.

ಶ್ರೀ. ಆರ್. ಧ್ರುವನಾರಾಯಣ್ ರವರು ಮಾತನಾಡಿ, ಈ ಉಪ ಯೋಜನೆಗಳಡಿ ಈಗಾಗಲೇ ವಿವಿಧ ಇಲಾಖೆಗಳ ಮೂಲಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕಾಲೋನಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗುತ್ತಿದ್ದು, ಇದರ ಬಗ್ಗೆ ಸಮಾಜ ಕಲ್ಯಾಣ ಇಲಾಖೆಯು ಸರ್ವೇ ಮಾಡಿ, ವರದಿ ಸಲ್ಲಿಸಲು ಸೂಚಿಸಲಾಗಿತ್ತು. 2016-17ನೇ ಸಾಲಿನಲ್ಲಿ ಈ ಎರಡು ಉಪಯೋಜನೆಗಳಡಿ ಅನುಷ್ಠಾನ ಮಾಡುತ್ತಿರುವ ಕಾರ್ಯಕ್ರಮಗಳ ಬಗ್ಗೆ ಸೋಷಿಯಲ್ ಆಡಿಟ್ ಮಾಡಲು ಸಮಾಜ ಕಲ್ಯಾಣ ಇಲಾಖೆಯಲ್ಲಿ ಸೋಷಿಯಲ್ ಆಡಿಟ್ ಘಟಕವನ್ನು ಸ್ಥಾಪಿಸಲು ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿದ್ದು, ಇದರ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು.

ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ರವರು ಕಾಲೋನಿಗಳ ಅಭಿವೃದ್ಧಿಯ ಬಗ್ಗೆ ಸರ್ವೇ ಮಾಡಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಹಾಗೂ ಸೋಷಿಯಲ್ ಆಡಿಟ್ ಘಟಕವನ್ನು ಸ್ಥಾಪಿಸುವ ಬಗ್ಗೆ ಆರ್.ಡಿ.ಪಿ.ಆರ್ ಇಲಾಖೆಯಲ್ಲಿ ಈಗಾಗಲೇ ಒಂದು ಸೋಷಿಯಲ್ ಆಡಿಟ್ ಘಟಕವು ಕಾರ್ಯ ನಿರ್ವಹಿಸುತ್ತಿದ್ದು, ಅದರಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿಯೂ ಸಹ ಒಂದು ಸೋಷಿಯಲ್ ಆಡಿಟ್ ಘಟಕವನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೆಂದು ತಿಳಿಸಿದರು.

1. <u>ಕೃಷಿ ಇಲಾಖೆ:-</u>

ಪ್ರಸಕ್ತ ಸಾಲಿನಲ್ಲಿ ಎಲ್ಲಾ ಇಲಾಖೆಗಳಿಗೆ ಹಂಚಿಕೆಯಾದ ಅನುದಾನವನ್ನು ಮತ್ತು ವಿವರವಾದ ಕ್ರಿಯಾ ಯೋಜನೆಗಳನ್ನು ತಯಾರಿಸಿ ನೋಡಲ್ ಏಜೆನ್ಸಿ ರವರ ಶಿಫಾರಸ್ಸಿನೊಂದಿಗೆ ಮಾಡಿದ ಮಾಹಿತಿಯನ್ನು ಎಲ್ಲಾ ಮಾನ್ಯ ಸದಸ್ಯರಿಗೆ ಒದಗಿಸಲಾಗಿದೆ.

ಕೃಷಿ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಲ್ಲಾ ಸಾಮರ್ಥ್ಯದ ಟ್ರಾಕ್ಟರ್ ಖರೀದಿಸಲು ಈಗ ನೀಡುತ್ತಿರುವ ರೂ.2.00 ಲಕ್ಷಗಳ ಸಹಾಯಧನವನ್ನು ರೂ.3.00 ಲಕ್ಷಕ್ಕೆ ಹೆಚ್ಚಿಸಲು ಮತ್ತು <u>"ವೆಚ್ಚವಾಗದೇ ಇರುವ ಮೊತ್ತದಲ್ಲಿ"</u> ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರನ್ನು ಮತ್ತು ಕೃಷಿ ಕಾರ್ಮಿಕರನ್ನು ವಿದೇಶಿ ಅಧ್ಯಯನ ಪ್ರವಾಸಗಳಿಗೆ ಕಳುಹಿಸಲು ನೋಡಲ್ ಏಜೆನ್ಸಿಯಿಂದ ಶಿಫಾರಸ್ಸು ಮಾಡಲಾಗಿದೆ.

ಈ ಬಗ್ಗೆ ಶ್ರೀ. ಗೋವಿಂದ ಕಾರಜೋಳ ರವರು ಮಾತನಾಡಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರ ಅಭಿವೃದ್ಧಿಗಾಗಿ ಈ ಇಲಾಖೆಯ ವತಿಯಿಂದ ಕೃಷಿ ಭಾಗ್ಯ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದ್ದು, ಕೃಷಿ ಪರಿಕರಗಳಾದ ನೇಗಿಲು / ಹಾರೆ / ಪಿಕಾಸಿ / ಗುದ್ದಲಿಗಳನ್ನು ಹಿಂದಿನ ಸಾಲಿನಲ್ಲಿ ವಿತರಣೆ ಮಾಡಿದ ರೈತರಿಗೇ ಪುನಃ ಪುನಃ ನೀಡುವ ಪ್ರವೃತ್ತಿಯು ಈ ಇಲಾಖೆಯಲ್ಲಿ ನಿರ್ವಹಿಸಲಾಗುತ್ತಿದ್ದು, ಅದರ ಬದಲಿಗೆ ಉಪಯುಕ್ತ ಕಾರ್ಯಕ್ರಮಗಳಿಗೆ ಸರ್ಕಾರದ ಅನುದಾನವನ್ನು ವಿನಿಯೋಗಿಸಬೇಕೆಂದು ಹೇಳಿದರು. ಮತ್ತು ಕೃಷಿ ಇಲಾಖೆಯಲ್ಲಿ ನೀಡಲಾಗುತ್ತಿರುವ ಪರಿಕರಗಳು ಸಹ ದುರ್ಬಳಕೆ ಆಗುತ್ತಿರುವುದಾಗಿ ತಿಳಿಸಿದರು. ಆದ್ದರಿಂದ ಅನುದಾನವನ್ನು ಮರುಹೊಂದಾಣಿಕೆ ಮಾಡಿಕೊಂಡು ಶಿಕ್ಷಣಕ್ಕೆ ಉಪಯೋಗಿಸುವುದು ಸೂಕ್ತವಾಗಿದೆಯೆಂದು ತಿಳಿಸಿದರು. ಕೃಷಿ ಹೊಂಡ ಯೋಜನೆಗೆ ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಬೇಡಿಕೆ ಇದ್ದು, ಇದನ್ನು ಅನುಷ್ಟಾನಗೊಳಿಸಲು 1½ ರಿಂದ 2 ಎಕರೆ ಜಮೀನನ್ನು ಹೊಂದಿರುವ ರೈತರ ಜಮೀನಿನಲ್ಲಿ ಕೃಷಿ ಹೊಂಡವನ್ನು ಮಾಡಲು ಸುಮಾರು ರೂ.1.00 ಲಕ್ಷ ವೆಚ್ಚವಾಗುತ್ತಿದ್ದು, ಸದರಿ ಕಾರ್ಯಕ್ರಮಕ್ಕೆ ಸರ್ಕಾರದ ವತಿಯಿಂದ ಹೆಚ್ಚಿನ ಅನುದಾನವನ್ನು ಒದಗಿಸಬೇಕೆಂದು ಸಲಹೆ ನೀಡಿದರು.

ಸದಸ್ಯರಾದ ಡಾ|| ಉಮೇಶ್ ಜಾದವ್ ರವರು ಮಾತನಾಡಿ ಕೃಷಿ ಇಲಾಖೆಯ ವತಿಯಿಂದ 25 ಹೆಚ್.ಪಿ ಟ್ರ್ಯಾಕ್ಟರುಗಳನ್ನು ನೀಡಲಾಗುತ್ತಿದ್ದು, ಇದಕ್ಕೆ ಬದಲಾಗಿ 50 ಹೆಚ್.ಪಿ ಸಾಮರ್ಥ್ಯದ ಟ್ರ್ಯಾಕ್ಟರುಗಳನ್ನು ನೀಡಬೇಕೆಂದು, ಇದರಿಂದ ರೈತರು ತಮ್ಮ ಜಮೀನುಗಳಲ್ಲಿ ಮಾಡಬೇಕಾದ ಕೆಲಸದ ನಂತರ ಬೇರೆಯವರ ಜಮೀನಿನ ಕೆಲಸವನ್ನು ಮಾಡಿ ಅದರಿಂದ ಆದಾಯಗಳಿಸಬಹುದಾಗಿರುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರ ಪೈಕಿ ದೊಡ್ಡ ಪ್ರಮಾಣದ ರೈತರು ಮಾತ್ರ ಟ್ರ್ಯಾಕ್ಟರ್‌ಗಳನ್ನು ಉಪಯೋಗಿಸುವ ಸಾಧ್ಯತೆಯಿರುತ್ತದೆ. ಆದರೆ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಟ್ರ್ಯಾಕ್ಟರ್‌ಗಳನ್ನು ಉಪಯೋಗಿಸುವ ಸಂದರ್ಭ ಕಡಿಮೆ. ಕೆಲವೊಮ್ಮೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರ ಹೆಸರಿನಲ್ಲಿ ಬೇರೆ ಜನಾಂಗದವರು ದುರುಪಯೋಗ ಮಾಡುವ ಸಾಧ್ಯತೆಗಳಿವೆ. ಇದಕ್ಕೆ ಬದಲಾಗಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಣ್ಣ ರೈತರಿಗೆ ಹೆಚ್ಚಿನ ರೀತಿಯಲ್ಲಿ ಉಪಯೋಗವಾಗುವಂತಹ ಕಾರ್ಯಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಸೂಚಿಸಿದರು.

ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ ರವರು ಮಾತನಾಡಿ, ಕೃಷಿ ಯಾಂತ್ರೀಕರಣದಡಿಯಲ್ಲಿ 2015-16ನೇ ಸಾಲಿನಲ್ಲಿ 60 ಟ್ರ್ಯಾಕ್ಟರ್‌ಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರಿಗೆ ವಿತರಣೆ ಮಾಡಲಾಗಿದೆ. ಇದು ಅಲ್ಪಪ್ರಮಾಣವಾಗಿರುತ್ತದೆ. ಇದಲ್ಲದೇ ಕೃಷಿ ಇಲಾಖೆಯು ಹೋಬಳಿ ಮಟ್ಟದಲ್ಲಿ ಕೃಷಿ ಯಂತ್ರಧಾರೆ ಯೋಜನೆಯಡಿ <u>"ಕೃಷಿ ಯಂತ್ರೋಪಕರಣ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳನ್ನು"</u> ಸ್ಥಾಪಿಸಿದ್ದು, ಈ ಕೇಂದ್ರದ ಮುಖಾಂತರ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರುಗಳು ಟ್ರ್ಯಾಕ್ಟರ್‌ಗಳನ್ನು

ಬಾಡಿಗೆ ಮೇಲೆ ಪಡೆಯಲು ಅವಕಾಶ ಕಲ್ಪಿಸಲಾಗಿದೆಯೆಂದು ತಿಳಿಸಿದರು. ಕೃಷಿ ಭಾಗ್ಯ ಯೋಜನೆಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಂದ ಹೆಚ್ಚಿನ ಬೇಡಿಕೆ ಇರುತ್ತದೆ. ಇದಕ್ಕೆ ಹೆಚ್ಚುವರಿಯಾಗಿ ರೂ.72.00 ಕೋಟಿಗಳು ಅವಶ್ಯವಿದೆಯೆಂದು ತಿಳಿಸಿ, ಸದರಿ ಮೊತ್ತವನ್ನು ನೀಡಬೇಕೆಂದು ಕೋರಿದರು.

ಶ್ರೀ. ಹೆಚ್.ಕೆ. ಪಾಟೀಲ್, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾತನಾಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಣ್ಣ ಮತ್ತು ಅತೀ ಸಣ್ಣ ರೈತರು ತಮ್ಮ ಜಮೀನಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಮಾಡಿರುವ ತೋಟಗಳಿಗೆ ಬೇಲಿ ಹಾಕಿಸಲು ಮತ್ತು ಮಸಾರಿ ಭೂಮಿ ಹೊಂದಿರುವ ರೈತರಿಗೆ ಯಾವುದೇ ರೀತಿಯ ಆದಾಯ ಇರುವುದಿಲ್ಲವಾದ್ದರಿಂದ, ಅಂತಹವರಿಗೆ ಇಲಾಖೆಯ ವತಿಯಿಂದ ಸಹಾಯ ಮಾಡಬೇಕಾಗಿದೆ. ಇದರಿಂದ ರೈತರು ತೋಟಗಳನ್ನು ಮಾಡಬಹುದು ಮತ್ತು ರೈತರಿಗೆ ಅದು ಒಂದು ಆಸ್ತಿಯಾಗುವ ಜೊತೆಗೆ ನಿಯಮಿತವಾಗಿ ಆದಾಯ ತಂದುಕೊಡುತ್ತದೆ. ಆದ್ದರಿಂದ ಇದಕ್ಕೆ ಹೆಚ್ಚಿನ ಆದ್ಯತೆ ನೀಡಲು ಸಲಹೆ ನೀಡಿದರು.

ಶ್ರೀ. ಬಸವರಾಜು ರಾಯರೆಡ್ಡಿ, ಮಾನ್ಯ ಉನ್ನತ ಶಿಕ್ಷಣ ಸಚಿವರು ಮಾತನಾಡಿ, ಉತ್ತರ ಕರ್ನಾಟಕ ಭಾಗದಲ್ಲಿ ಕೃಷಿ ಹೊಂಡ ಕಾರ್ಯಕ್ರಮಕ್ಕೆ ಹೆಚ್ಚಿನ ಬೇಡಿಕೆ ಇರುವುದರಿಂದ, ಇದಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಬೇಕೆಂದು ಸಲಹೆ ನೀಡಿದರು.

ಶ್ರೀ. ಕಾಗೋಡು ತಿಮ್ಮಪ್ಪ, ಮಾನ್ಯ ಕಂದಾಯ ಸಚಿವರು ಮಾತನಾಡಿ, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಿಗೆ ಸರ್ಕಾರದ ವತಿಯಿಂದ ಮಂಜೂರಾಗಿರುವ ಜಮೀನುಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಪಿ.ಟಿ.ಸಿ.ಎಲ್ ಕಾಯಿದೆ ಇದ್ದರೂ ಸಹ ಇದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಎಲ್ಲಾ ರೀತಿಯ ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾತನಾಡಿ, ಕೆಲವೊಂದು ನಗರ ಪ್ರದೇಶಗಳಲ್ಲಿ ಬಡಾವಣೆ ಇತ್ಯಾದಿಗಳನ್ನು ಮಾಡುವಾಗ ಅನಿವಾರ್ಯವಾಗಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ತಮ್ಮ ಜಮೀನುಗಳನ್ನು ಮಾರಾಟ ಮಾಡಬೇಕಾಗುತ್ತದೆ. ಈ ಸಂಬಂಧ ಪರಿಶೀಲಿಸಿ, ಕ್ರಮ ಜರುಗಿಸುವುದಾಗಿ ತಿಳಿಸಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಮಾತನಾಡಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರು ತಮ್ಮ ಜಮೀನಿನಲ್ಲಿ ಕೃಷಿ ಹೊಂಡಗಳನ್ನು ಹೊಂದಿದ್ದಲ್ಲಿ ಅಂತಹವರನ್ನು ಗುರ್ತಿಸಿ, ಅವರಿಗೆ ಪಂಪ್‌ಸೆಟ್ ಹಾಗೂ ತುಂತುರು ನೀರಾವರಿ ಪರಿಕರಗಳನ್ನು ವಿತರಿಸಿದಲ್ಲಿ ಕೃಷಿಯಲ್ಲಿ ಹೆಚ್ಚಿನ ಪ್ರಯೋಜನವಾಗುವುದೊಂದಿಗೆ ರೈತರಿಗೆ ಸಹಾಯ ಮಾಡಿದಂತಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

## 2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ:-

ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರು ಮಾತನಾಡಿ, ರಾಜ್ಯದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರ ಅಭಿವೃದ್ಧಿಗಾಗಿ ಮುಂಬರುವ ಎರಡು ವರ್ಷಗಳಲ್ಲಿ ಅಂದರೆ 2016-17 ಮತ್ತು 2017-18ನೇ ಸಾಲುಗಳಲ್ಲಿ ರಾಜ್ಯದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರು ಶೇ.50 ಕ್ಕಿಂತಲೂ ಹೆಚ್ಚಾಗಿ ವಾಸಿಸುತ್ತಿರುವ 1,000 ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಹೊಸ ಯೋಜನೆಯನ್ನು ರೂಪಿಸಬೇಕಾಗಿರುತ್ತದೆ. ಇದಕ್ಕೆ ಮುಖ್ಯಮಂತ್ರಿಗಳ ಮಾದರಿ ಗ್ರಾಮಗಳು ಎಂದು ಹೆಸರಿಡಬಹುದು. ಇದು ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಆದರ್ಶ ಗ್ರಾಮ ಯೋಜನೆ ಮಾದರಿಯಲ್ಲಿ ಅನುಷ್ಠಾನಗೊಳಿಸಬಹುದಾಗಿರುತ್ತದೆ. ಪ್ರತಿ ಗ್ರಾಮಕ್ಕೆ ರೂ.2.00 ಕೋಟಿಗಳ ವೆಚ್ಚದಲ್ಲಿ ಅವಶ್ಯವಿರುವ ಎಲ್ಲಾ

ಮೂಲಭೂತ ಸೌಕರ್ಯಗಳನ್ನು ಒದಗಿಸಬಹುದಾಗಿದೆ. ಇದಕ್ಕೆ ತಗಲುವ ವೆಚ್ಚವನ್ನು ಮತ್ತು ಹೊಸ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಒದಗಿಸಿದ ಅನುದಾನದಿಂದ ಮತ್ತು ಅಚ್ಚುಕಟ್ಟು ಪ್ರದೇಶಗಳಲ್ಲಿ ಬರುವ ಗ್ರಾಮಗಳನ್ನು ಅಭಿವೃದ್ಧಿಪಡಿಸಲು ಭಾರಿ ನೀರಾವರಿ ಇಲಾಖೆಯಡಿ ಒದಗಿಸಿದ ಅನುದಾನದಿಂದ ಅಭಿವೃದ್ಧಿಪಡಿಸುವುದು ಎಂದು ಪ್ರಸ್ತಾಪಿಸಿ, ಇದಕ್ಕೆ ಅನುಮೋದನೆಯನ್ನು ನೀಡಬೇಕೆಂದು ಅಧ್ಯಕ್ಷರನ್ನು ಕೋರಿದರು.

ಶ್ರೀ. ಹೆಚ್.ಕೆ. ಪಾಟೀಲ್, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ "ಗ್ರಾಮ ವಿಕಾಸ ಯೋಜನೆಯಡಿಯಲ್ಲಿ" ಗ್ರಾಮಗಳನ್ನು ಆಯ್ಕೆ ಮಾಡಿ, ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತದೆ ಎಂದು ತಿಳಿಸಿದರು. ಬಾಂಬೆ ಕರ್ನಾಟಕ ಪ್ರದೇಶದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರು ಶೇ.50 ಕ್ಕಿಂತ ಹೆಚ್ಚಾಗಿ ವಾಸಿಸುವ ಗ್ರಾಮಗಳು ಹೆಚ್ಚಿನ ಸಂಖ್ಯೆಯಲ್ಲಿ ಇರುವುದಿಲ್ಲವಾದ್ದರಿಂದ ಈ ಭಾಗದಲ್ಲಿ ಮಾನ್ಯ ಸಮಾಜ ಕಲ್ಯಾಣ ಇಲಾಖಾ ಸಚಿವರು ಪ್ರಸ್ತಾಪಿಸಿರುವ ಹೊಸ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ಕಷ್ಟಕರವಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಶ್ರೀ. ಬಸವರಾಜು ರಾಯರೆಡ್ಡಿ, ಮಾನ್ಯ ಉನ್ನತ ಶಿಕ್ಷಣ ಸಚಿವರು ಮಾತನಾಡಿ, ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಶೇ.50 ಕ್ಕಿಂತ ಹೆಚ್ಚು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರು ವಾಸಿಸುವ ಗ್ರಾಮಗಳು ಲಭ್ಯವಿರುತ್ತದೆ. ಸದರಿ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ರಾಜ್ಯದಲ್ಲಿ ಗ್ರಾಮಾಂತರ ಮತಕ್ಷೇತ್ರಗಳಲ್ಲಿ, ಪ್ರತಿ ತಾಲೂಕಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅತೀ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ 10 ಗ್ರಾಮಗಳನ್ನು ಆದ್ಯತೆ ಮೇಲೆ ಆಯ್ಕೆ ಮಾಡಿಕೊಂಡು ಮಾದರಿ ಗ್ರಾಮವನ್ನಾಗಿ ಮಾಡಲು ವಿಶೇಷ ಪ್ಯಾಕೇಜ್ ವ್ಯವಸ್ಥೆಯನ್ನು ಕಲ್ಪಿಸಬಹುದೆಂದು ತಿಳಿಸಿದರು.

ಶ್ರೀ. ಆರ್. ಧ್ರುವನಾರಾಯಣ್ ರವರು ಮಾತನಾಡಿ, ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಮತ್ತು ಉದ್ಯೋಗ ಖಾತ್ರಿ (ನರೇಗಾ) ಯೋಜನೆಗಳು ಕೇಂದ್ರ ಸರ್ಕಾರದ ಯೋಜನೆಗಳಾಗಿದ್ದು, ಈ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನ ಪ್ರಸಕ್ತ ಸಾಲಿನಲ್ಲಿ ಒದಗಿಸಲಾಗಿರುತ್ತದೆ. ನರೇಗಾ ಯೋಜನೆಯಡಿಯಲ್ಲಿ ಯಾವ ಅನುಪಾತದಲ್ಲಿ ಅನುದಾನ ಬರುತ್ತಿದೆ, ಕಳೆದ ಸಾಲಿನಲ್ಲಿ ಎಷ್ಟು ಅನುದಾನವನ್ನು ವೆಚ್ಚ ಮಾಡಲಾಗಿದೆ ಎಂಬುದರ ವಿವರಣೆಯನ್ನು ಕೇಳಿದರು. ಈ ಕಾರ್ಯಕ್ರಮಗಳು ಕೇಂದ್ರ ಸರ್ಕಾರದ ಕಾರ್ಯಕ್ರಮಗಳಾಗಿರುವುದರಿಂದ ಅವುಗಳಿಗೆ SCSP/TSP ಅನುದಾನವನ್ನು ಉಪಯೋಗಿಸುವ ಅವಶ್ಯಕತೆ ಏನಿದೆ ಎಂದು ಹೇಳಿದರು. ಇದಕ್ಕೆ ಆಯುಕ್ತರು, ಉದ್ಯೋಗ ಖಾತ್ರಿ ಇಲಾಖೆ ರವರು ಮಾತನಾಡಿ, ನರೇಗಾ ಕಾರ್ಯಕ್ರಮಕ್ಕೆ 90 : 10 ಅನುಪಾತದಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆಯೆಂದು ತಿಳಿಸಿದರು ಮತ್ತು ಕಳೆದ ಸಾಲಿನಲ್ಲಿ ಸಂಪೂರ್ಣ ಅನುದಾನವನ್ನು ವೆಚ್ಚ ಮಾಡಿ, ರಾಷ್ಟ್ರದಲ್ಲಿ ಎರಡನೇ ಸ್ಥಾನ ಪಡೆಯಲಾಗಿದೆಯೆಂದು SCSP/TSP ಯೋಜನೆಯಡಿಯಲ್ಲಿ ನಿಗದಿಪಡಿಸಿದ ಅನುದಾನ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಜನಾಂಗದವರಿಗೆ ನೇರವಾಗಿ ಉಪಯೋಗವಾಗುತ್ತಿದೆಯೆಂದು ವಿವರಿಸಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರು ಮಾತನಾಡಿ, 2014-15 ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ಇಲಾಖೆಗಳಲ್ಲಿ ಬಳಕೆಯಾಗದಿರುವ ಅನುದಾನ ಒಟ್ಟು ರೂ.1835.83 ಕೋಟಿಗಳನ್ನು ಆಯಾ ಇಲಾಖೆಗಳ ಬೇಡಿಕೆಯಲ್ಲಿ ಒದಗಿಸಲಾಗಿರುತ್ತದೆ. ಸದರಿ ಮೊತ್ತದಲ್ಲಿ ಆಯಾ ಇಲಾಖೆಗಳು ಕ್ರಿಯಾ ಯೋಜನೆಗಳನ್ನು ಸಲ್ಲಿಸಿರುತ್ತಾರೆ. ಸದರಿ ಕಾರ್ಯಕ್ರಮಗಳ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡಬೇಕಾಗಿದೆ ಎಂದು ಮತ್ತು ಸದರಿ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಗೆ

ವರ್ಗಾವಣೆ ಮಾಡಲು ಸಾಧ್ಯವಾಗುವುದಿಲ್ಲವೆಂದು ಅಧ್ಯಕ್ಷರ ಗಮನಕ್ಕೆ ತಂದರು. ರಾಜ್ಯದ ಯೋಜನಾ ಗಾತ್ರದಲ್ಲಿ ಕೇಂದ್ರ ಸರ್ಕಾರದ ಅನುದಾನವನ್ನು ಸಹ ಸೇರಿಸಿಕೊಂಡು SCSP/TSP ಯಡಿಯಲ್ಲಿ ವಿವಿಧ ಕಾರ್ಯಕ್ರಮಗಳಿಗೆ ಶೇ.24.10 ರಷ್ಟು ಅನುದಾನವನ್ನು ನೀಡಲಾಗುತ್ತಿದೆ. ಅದರಿಂದ ಮೇಲ್ಕಂಡ ಕೇಂದ್ರ ಪುರಸ್ಕೃತ ಯೋಜನೆಗಳಿಗೂ ಸಹ SCSP/TSP ಅನುದಾನವನ್ನು ಪ.ಜಾತಿ / ಪ.ಪಂಗಡದ ಜನಸಂಖ್ಯೆಯ ಅನುಪಾತದಲ್ಲಿ ಮಾತ್ರ ಒದಗಿಸಲಾಗುತ್ತದೆ. ಯೋಜನೆಯ ಒಟ್ಟಾರೆ ಮೊತ್ತ ಬಹಳಷ್ಟು ಜಾಸ್ತಿ ಇರುತ್ತದೆ ಎಂದು ಸಭೆಯ ಗಮನಕ್ಕೆ ತಂದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಇಲಾಖೆ, ಭಾರಿ ನೀರಾವರಿ ಇಲಾಖೆ ಮತ್ತು ಇತರೆ ಎಲ್ಲಾ ಇಲಾಖೆಗಳಲ್ಲಿ ಬಳಕೆಯಾಗದೇ ಇರುವ ಅನುದಾನದ ಕ್ರಿಯಾ ಯೋಜನೆಗಳನ್ನು ಮತ್ತೊಮ್ಮೆ ಪರಿಶೀಲಿಸುವ ಅಗತ್ಯವಿದೆ ಎಂದು ತಿಳಿಸಿದರು.

ಇದಕ್ಕೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ನೋಡಲ್ ಏಜೆನ್ಸಿ ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಭಾರಿ ಮತ್ತು ಸಣ್ಣ ನೀರಾವರಿ ಇಲಾಖೆ, ನಗರಾಭಿವೃದ್ಧಿ ಇಲಾಖೆಗಳ ಕ್ರಿಯಾಯೋಜನೆಗಳ ಬಗ್ಗೆ ಚರ್ಚಿಸಲಾಗಿರುತ್ತದೆ. ಅದರಂತೆ, ಸಿದ್ಧಪಡಿಸಿದ ಕ್ರಿಯಾಯೋಜನೆಗಳಿಗೆ ಅನುಮೋದನೆಯನ್ನು ನೀಡುವುದು ಸೂಕ್ತವಾಗಿದೆ ಎಂದು ತಿಳಿಸಿದರು. ಹಿಂದಿನ ವರ್ಷದಲ್ಲಿಯೂ ಸಹ ವಿಳಂಬವಾಗಿ ಭಾರಿ ನೀರಾವರಿ ಇಲಾಖೆಯ ಕ್ರಿಯಾ ಯೋಜನೆಯು ಅನುಮೋದನೆಯಾದ್ದರಿಂದ ಅನುದಾನವನ್ನು ಉಪಯೋಗಿಸಲು ಸಾಧ್ಯವಾಗಿರುವುದಿಲ್ಲ. ಕಾರಣ ಕ್ರಿಯಾ ಯೋಜನೆಗಳನ್ನು ಈ ಸಭೆಯಲ್ಲಿ ಅನುಮೋದಿಸಲು ಕೋರಿದರು.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಈ ಉಪ ಯೋಜನೆಗಳಡಿ ಕಳೆದ ಸಾಲಿನಲ್ಲಿ ಮುಂಚಿತವಾಗಿ ಕ್ರಿಯಾಯೋಜನೆಗಳಿಗೆ ಅನುಮೋದನೆಯನ್ನು ನೀಡಿರುವುದರಿಂದ ಶೇ.93 ರಷ್ಟು ಪ್ರಮಾಣದಲ್ಲಿ ಅನುದಾನ ವೆಚ್ಚವಾಗಿರುತ್ತದೆ. ಆದ್ದರಿಂದ ಪ್ರಸಕ್ತ ಸಾಲಿನಲ್ಲಿಯೂ ಸಹ ಮುಂಚಿತವಾಗಿ ವಿವಿಧ ಅಭಿವೃದ್ಧಿ ಇಲಾಖೆಗಳ ಕ್ರಿಯಾ ಯೋಜನೆಗಳಿಗೆ ಅನುಮೋದನೆಯನ್ನು ನೀಡಿದಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಲು ಅನುಕೂಲವಾಗುತ್ತದೆ ಎಂದು ತಿಳಿಸುತ್ತಾ, ನೋಡಲ್ ಏಜೆನ್ಸಿ ಶಿಫಾರಸ್ಸಿನೊಂದಿಗೆ ಸಲ್ಲಿಸಿದ ಎಲ್ಲಾ ಇಲಾಖೆಗಳ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡಬೇಕಾಗಿದೆ ಎಂದು ಸೂಚಿಸಿದರು.

ಅಂತಿಮವಾಗಿ ಎಲ್ಲಾ ವಿಷಯಗಳನ್ನು ಚರ್ಚಿಸಿ ಮತ್ತು ಏನಾದರೂ ಸೇರ್ಪಡೆ / ಮಾರ್ಪಾಡು ಇದ್ದಲ್ಲಿ ಅದನ್ನು ಸಹ ಸರಿಪಡಿಸುವ ಷರತ್ತಿಗೊಳಪಟ್ಟು ಎಲ್ಲಾ ಇಲಾಖೆಗಳ ಕ್ರಿಯಾ ಯೋಜನೆಗಳಿಗೆ ಸಮಿತಿಯು ಅನುಮೋದನೆ ನೀಡಲಾಯಿತು. ಇಲಾಖಾವಾರು / ಯೋಜನಾವಾರು ಅನುಮೋದಿಸಿದ ಕ್ರಿಯಾ ಯೋಜನೆಗಳ ವಿವರಗಳನ್ನು ಲಗತ್ತಿಸಿದೆ.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಈ ಕೆಳಕಂಡ ಸೂಚನೆಗಳನ್ನು ನೀಡಿದರು.

1. 2016-17ನೇ ಸಾಲಿನಲ್ಲಿ ಇಲಾಖೆಗಳು ಸಲ್ಲಿಸಿದ ಕ್ರಿಯಾ ಯೋಜನೆಗಳಿಗೆ ರಾಜ್ಯ ಅಭಿವೃದ್ಧಿ ಪರಿಷತ್ತಿನಲ್ಲಿ ಅನುಮೋದನೆ ನೀಡಿದ್ದು, ಎಲ್ಲಾ ಇಲಾಖೆಗಳು ತಮಗೆ ಒದಗಿಸಲಾಗಿರುವ ಅನುದಾನವನ್ನು ಉಪಯೋಗಿಸಿಕೊಂಡು ಶೇ.100 ರಷ್ಟು ಪ್ರಗತಿ ಸಾಧಿಸಬೇಕೆಂದು.

2. ಇಲಾಖೆಗಳು ಯಾವುದೇ ಕಾರಣಕ್ಕೂ ಅನುದಾನವನ್ನು ವ್ಯಪಗತವಾಗದಂತೆ ಕ್ರಮ ವಹಿಸಿ, ಪ್ರಸಕ್ತ ಸಾಲಿನಲ್ಲಿಯೂ ಸಹ ಪೂರ್ಣ ಅನುದಾನವನ್ನು ಖರ್ಚು ಮಾಡತಕ್ಕದ್ದು.

3. ಈ ಉಪ ಯೋಜನೆಗಳಡಿ ಅನುದಾನವನ್ನು ಖರ್ಚು ಮಾಡಲು ವಿಫಲರಾಗುವ ಅಧಿಕಾರಿಗಳ ಮೇಲೆ ಕಾಯ್ದೆ 24 ರಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

4. ಮಾನ್ಯ ಸಮಾಜ ಕಲ್ಯಾಣ ಸಚಿವರು ಮೂರು ತಿಂಗಳುಗಳಿಗೊಮ್ಮೆ ಪ್ರಗತಿ ಪರಿಶೀಲನೆಯನ್ನು ನಡೆಸಿ, ಎಲ್ಲಾ ಇಲಾಖೆಗಳು ನಿರೀಕ್ಷಿತ ಪ್ರಗತಿಯನ್ನು ಸಾಧಿಸಲು ಮಾರ್ಗದರ್ಶನ ನೀಡಿ, ಮೇಲುಸ್ತುವಾರಿಯನ್ನು ವಹಿಸಬೇಕೆಂದು ಸೂಚಿಸಿದರು. ಇದರೊಂದಿಗೆ ಸಭೆಯು ಮುಕ್ತಾಯವಾಯಿತು.

ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರು ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆಯನ್ನು ಯಶಸ್ವಿಯಾಗಿ ನಡೆಸಿಕೊಟ್ಟಂತಹ ಮಾನ್ಯ ಮುಖ್ಯಮಂತ್ರಿಯವರಿಗೆ, ಸಚಿವರುಗಳಿಗೆ, ಸದಸ್ಯರುಗಳಿಗೆ ಎಲ್ಲಾ ಅಧಿಕಾರಿಗಳಿಗೂ ವಂದನೆಗಳನ್ನು ಸಲ್ಲಿಸಿ, ಮುಕ್ತಾಯಗೊಳಿಸಿದರು.

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು ಹಾಗೂ ಅಧ್ಯಕ್ಷರು
ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ
ಪಂಗಡಗಳ ಅಭಿವೃದ್ಧಿ ಪರಿಷತ್ತು.